**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 22/2019**

**ಚಾ.ಸಾ. :- 09**
**ಪ್ರಾ.ಸಾ. :- 08**

| | | |
|---|---|---|
| ಹೆಸರು | : | ಲೋಕೇಶ |
| ತಂದೆಯ ಹೆಸರು | : | ರಾಮೇಗೌಡ |
| ವಯಸ್ಸು | : | 59 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಕ್ಯಾತನಹಳ್ಳಿ ಗ್ರಾಮ. |

---

**ಪ್ರಮಾಣೀಕರಿಸಲಾದ ದಿನಾಂಕಃ- 23.03.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಸಿ)** ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸ.ಸ.ಅ. ವಾದವನ್ನು ಆಲಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ಮಹಜರ್ ಸಮಯದಲ್ಲಿ ಸ್ಥಳದಿಂದ ಅಪಘಾತಕ್ಕೆ ಸಂಬಂಧಿಸಿದಂತೆ 1 ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ ಹಾಗೂ ಓದಿ ನೋಡಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ಮಹಜರ್ ಗೆ ಸಹಿ ಮಾಡಿರುವ ದಿನಾಂಕ ನೆನಪಿಲ್ಲ. ಮಹಜರನ್ನು ನಾನು ಓದಿಲ್ಲ. ಮೃತರು ನಮ್ಮ ಊರಿನವರು. ನನ್ನ ಮುಂದೆ ಯಾವುದೇ ಕಚ್ಚಾ ನಕಾಶೆ ಬರೆದಿರುವುದಿಲ್ಲ ಎಂದರೆ ಸರಿ. ಮೃತರ ಕುಟುಂಬಕ್ಕೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :- ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**